4



ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಪಾಲರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ    ದಿನಾಂಕ : DATE : 20/6/20

## ವಿಶ್ವವಿದ್ಯಾಲಯ ಕಾನೂನು ತಿದ್ದುಪಡಿ ಸುಗ್ರೀವಾಜ್ಞೆಗೆ ರಾಜ್ಯಪಾಲರ ಅಂಕಿತ

ಬೆಂಗಳೂರು: ವಿಶ್ವವಿದ್ಯಾಲಯಗಳಲ್ಲಿ ಲೆಕ್ಕಪತ್ರ ಕ್ಷೇತ್ರದ ಪರಿಣಿತರನ್ನು ಹಣಕಾಸು ಅಧಿಕಾರಿಯಾಗಿ ನೇಮಿಸುವುದು ಸೇರಿ ಹಲವು ಸುಧಾರಣೆಗಳನ್ನು ಒಳಗೊಂಡ ಕರ್ನಾಟಕ ವಿಶ್ವವಿದ್ಯಾಲಯಗಳು ಮತ್ತು ಇತರ ಕೆಲವು ಕಾನೂನು ತಿದ್ದುಪಡಿ ಸುಗ್ರೀವಾಜ್ಞೆಗೆ ರಾಜ್ಯಪಾಲರು ಶುಕ್ರವಾರ ಅಂಕಿತ ಹಾಕಿದ್ದಾರೆ. ಕಳೆದ ವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ಹೆಸರನ್ನು ಬೆಂಗಳೂರು ಸಿಟಿ ವಿವಿ ಎಂಬುದಾಗಿ ಮರುನಾಮಕರಣ ಮಾಡುವುದು, ರಾಜ್ಯ ಮುಕ್ತ ವಿಶ್ವವಿದ್ಯಾಲಯದಿಂದ ದೂರಶಿಕ್ಷಣ, ನೃಪತುಂಗ ವಿಶ್ವವಿದ್ಯಾಲಯ ಸ್ಥಾಪನೆಗೆ ಒಪ್ಪಿಗೆ ನೀಡಲಾಗಿತ್ತು. ಈ ಸುಗ್ರೀವಾಜ್ಞೆಯಲ್ಲಿ ಆ ಅಂಶಗಳನ್ನು ಒಳಗೊಂಡಂತೆ ಹೊಸ ಕ್ಲಸ್ಟರ್ ವಿವಿಗಳಿಗೆ ಮೊದಲ ಕುಲಪತಿಗಳನ್ನು ಸರ್ಕಾರವೇ ನೇಮಕಾತಿ ಮಾಡುವುದಕ್ಕೆ ಅಧಿಕಾರ, ಎಲ್ಲ ವಿವಿಗಳಿಗೆ ಕುಲಸಚಿವರನ್ನಾಗಿ ಅಖಿಲ ಭಾರತ ಸೇವೆಯ (ಐಎಎಸ್, ಐಪಿಎಸ್ ಇತ್ಯಾದಿ) ಅಥವಾ ಕೆಎಎಸ್ ಅಧಿಕಾರಿಗಳನ್ನಷ್ಟೇ ನೇಮಕ ಮಾಡುವ ವಿಷಯವನ್ನು ಪ್ರಸ್ತಾಪಿಸಲಾಗಿದೆ. ಕರ್ನಾಟಕ ರಾಜ್ಯ ಮುಕ್ತ ವಿವಿ ಹೊರತುಪಡಿಸಿ ಇತರ ವಿಶ್ವವಿದ್ಯಾಲಯಗಳು ದೂರ ಶಿಕ್ಷಣವನ್ನು ನೀಡುವಂತಿಲ್ಲ.